# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 296
ಸದಸ್ಯರು ಹೆಸರು : ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 29.01.2026
ಉತ್ತರಿಸುವ ಸಚಿವರು : ಗೃಹ ಸಚಿವರು.

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚೆಗೆ ಬೆಂಗಳೂರು ನಗರದ ಚಾಮರಾಜಪೇಟೆಯ ಜೆ.ಜೆ.ನಗರ (ವಿ.ಎಸ್.ಗಾರ್ಡನ್) ಪ್ರದೇಶದಲ್ಲಿ 'ಓಂಶಕ್ತಿ' ಮೆರವಣಿಗೆ ಸಾಗುವ ಸಂದರ್ಭದಲ್ಲಿ ಕಿಡಿಗೇಡಿಗಳು ಕಲ್ಲು ತೂರಾಟ ನಡೆಸಿ, ಮಹಿಳೆಯರು ಮತ್ತು ಮಕ್ಕಳಿಗೆ ಗಾಯಗೊಳಿಸಿರುವ ಘಟನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಬಂದಿದೆ.<br><br>ದಿನಾಂಕ: 04.01.2026 ರಂದು ಜೆಜೆಆರ್ ನಗರ ಪೊಲೀಸ್ ಠಾಣಾ ವ್ಯಾಪ್ತಿಯ 9ನೇ ಎ ಮೈನ್ ರಸ್ತೆಯಲ್ಲಿ ಓಂ ಶಕ್ತಿ ಇರುಮುಡಿ ಮೆರವಣಿಗೆಯಲ್ಲಿದ್ದ ಭಕ್ತಾಧಿಗಳ ಮೇಲೆ ಕಲ್ಲು ತೂರಾಟ ನಡೆಸಿದ ಬಗ್ಗೆ ಶ್ರೀ ಶಶಿಕುಮಾರ್ ಎಂಬುವವರು ನೀಡಿದ ದೂರಿನ ಮೇರೆಗೆ ಜೆ.ಜೆ.ಆರ್ ನಗರ ಪೊಲೀಸ್ ಠಾಣಾ ಮೊ.ಸಂ. 02/2026 ಕಲಂ.118(1), 196(2 )ರೆ/ವಿ 3(5) ಬಿಎನ್ ಎಸ್ ಮತ್ತು ಕಲಂ3(2)(ವಿ-ಎ) ಎಸ್.ಸಿ ಎಸ್‌ಟಿ (ದೌರ್ಜನ್ಯ ತಡೆ) ಪ್ರಕರಣ ದಾಖಲು ಮಾಡಿಕೊಂಡು ತನಿಖೆ ಕೈಗೊಂಡಿರುತ್ತದೆ. ಈ ಪ್ರಕರಣದ ತನಿಖಾ ಕಾಲದಲ್ಲಿ ಇಬ್ಬರು ಕಾನೂನು ಸಂಘರ್ಷಕ್ಕೆ ಒಳಗಾದ ಅಪ್ರಾಪ್ತ ಬಾಲಕರನ್ನು ವಶಕ್ಕೆ ಪಡೆದುಕೊಂಡಿರುತ್ತದೆ. ನಂತರ ಕಾನೂನು ಸಂಘರ್ಷಕ್ಕೆ ಒಳಗಾದ ಅಪ್ರಾಪ್ತ ಬಾಲಕರನ್ನು ಮಕ್ಕಳ ಕಲ್ಯಾಣಾಧಿಕಾರಿಗಳಿಂದ ವಿಚಾರಣೆ ಮಾಡಿಸಿ ಬಾಲ ನ್ಯಾಯ ಮಂಡಳಿ ಮುಂದೆ ಹಾಜರುಪಡಿಸಿ ಬಾಲ ನ್ಯಾಯ ಮಂಡಳಿ ಆದೇಶದನ್ವಯ ಬಾಲಕರ ವೀಕ್ಷಣಾಲಯ ಮಡಿವಾಳ ಇಲ್ಲಿಗೆ ಒಪ್ಪಿಸಲಾಗಿರುತ್ತದೆ. |
| ಆ) | ಈ ಘಟನೆಗೆ ಸಂಬಂಧಿಸಿದಂತೆ ಈವರೆಗೆ ದಾಖಲಾಗಿರುವ ಎಫ್.ಐ.ಆರ್ (FIR) ಸಂಖ್ಯೆ ಎಷ್ಟು ಈ ಪ್ರಕರಣದಲ್ಲಿ ಬಂಧಿಸಲಾಗಿರುವ ಅಥವಾ ವಶಕ್ಕೆ ಪಡೆಯಲಾಗಿರುವ ಆರೋಪಿಗಳ ಸಂಖ್ಯೆ ಎಷ್ಟು ಮತ್ತು ಅವರ ವಿರುದ್ಧ ಕೈಗೊಂಡಿರುವ ಕಾನೂನು ಕ್ರಮಗಳೇನು; (ವಿವರ ನೀಡುವುದು) | |
| ಇ) | ರಾಜ್ಯದ ಗುಪ್ತಚರ (Intelligence) ವ್ಯವಸ್ಥೆಯು ಇಂತಹ ಸಂವೇದನಾಶೀಲ ಘಟನೆಗಳನ್ನು ಮುಂಚಿತವಾಗಿ ಪತ್ತೆಹಚ್ಚಿ ತಡೆಯುವಲ್ಲಿ ವಿಫಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ವೈಫಲ್ಯಕ್ಕೆ ಕಾರಣರಾದ ಅಧಿಕಾರಿಗಳ | ಇದು ಹಠಾತ್ ನಡೆದ ಘಟನೆಯಾಗಿದ್ದು, ಈ ಬಗ್ಗೆ ಸ್ಥಳೀಯ ಪೊಲೀಸರಿಗೆ ಯಾವುದೇ ಮಾಹಿತಿ ನೀಡಿರುವುದಿಲ್ಲ ಮತ್ತು ಅನುಮತಿಯನ್ನು ಸಹ ಪಡೆದಿರುವುದಿಲ್ಲ.<br><br>ಮುಂದಿನ ದಿನಗಳಲ್ಲಿ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳುವ ಸಲುವಾಗಿ ಗುಪ್ತಚರ ಇಲಾಖೆಯಿಂದ ಮುನ್ಸೂಚನಾ ಪತ್ರವನ್ನು ಹೊರಡಿಸಲಾಗಿರುತ್ತದೆ. |

| | | |
|---|---|---|
| | ವಿರುದ್ಧ ಸರ್ಕಾರ ಕ್ರಮ ಕೈಗೊಂಡಿದೆಯೇ; | |
| ಈ) | ಚಾಮರಾಜಪೇಟೆ ಹಾಗೂ ಜೆ.ಜೆ.ನಗರದಂತಹ ಸೂಕ್ಷ್ಮ ಪ್ರದೇಶಗಳಲ್ಲಿ ನಿರಂತರವಾಗಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಡುತ್ತಿದ್ದು, ಅಲ್ಲಿನ ನಿವಾಸಿಗಳಿಗೆ ಪೊಲೀಸರಿಂದ ಸೂಕ್ತ ರಕ್ಷಣೆ ಮತ್ತು ಸಹಕಾರ ದೊರೆಯುತ್ತಿಲ್ಲ ಎಂಬ ದೂರುಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಅಲ್ಲಿನ ಜನರ ಸುರಕ್ಷತೆಗಾಗಿ ಸರ್ಕಾರ ಕೈಗೊಂಡಿರುವ ವಿಶೇಷ ಕ್ರಮಗಳೇನು: | ಜೆ.ಜೆ.ಆರ್ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿ, ಈ ಸ್ಥಳದ ಕಣ್ಗಾವಲಿಗೆ ಸರ್ಕಾರದ ಹಾಗೂ ಶಾಸಕರು ಮತ್ತು ಸಂಸದರ ಅನುದಾನದಿಂದ ಸಿಸಿ ಟಿವಿಗಳನ್ನು ಅಳವಡಿಸಿ ಸೂಕ್ಷ್ಮ ಪ್ರದೇಶಗಳನ್ನು ಕಣ್ಗಾವಲಿನಲ್ಲಿ ಇರಿಸಲಾಗಿದೆ.<br><br>ಜೆ.ಜೆ.ಆರ್ ನಗರ ಪೊಲೀಸ್ ಠಾಣಾ ವ್ಯಾಪ್ತಿಯ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿ, ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದೆ. ಶಾಂತಿ ಪಾಲನಾ ಸಭೆ ನಡೆಸಿರುತ್ತದೆ. ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿ, ಈ ಸ್ಥಳಗಳಲ್ಲಿ ಹೆಚ್ಚಿನ ಭದ್ರತೆಗಾಗಿ ಪ್ರತಿದಿನ ಪಾಳಿಯಂತೆ ಕೆ.ಎಸ್.ಆರ್.ಪಿ ಪಡೆ ಮತ್ತು ಸಿ.ಎ.ಆರ್ ಪಡೆಗಳನ್ನು ನಿಯೋಜನೆ ಮಾಡಲಾಗುತ್ತಿದೆ. ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ ದೃಷ್ಠಿಯಿಂದ ಧಾರ್ಮಿಕ ಮುಖಂಡರ ಶಾಂತಿ ಸಭೆಯನ್ನು ನಿರಂತರವಾಗಿ ನಡೆಸಲಾಗಿದೆ. |
| ಉ) | ಧಾರ್ಮಿಕ ಮೆರವಣಿಗೆಗಳ ಮೇಲೆ ಕಲ್ಲು ತೂರಾಟದಂತಹ ಘಟನೆಗಳು ಮರುಕಳಿಸದಂತೆ ತಡೆಯಲು ಸದರಿ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳ ಅಳವಡಿಕೆ ಪೊಲೀಸ್ ಬಲವರ್ಧನೆ (Police Strengthening) ಹಾಗೂ ಸೂಕ್ಷ್ಮ ಸಂವೇದನಾ ಪ್ರದೇಶಗಳೆಂದು ಗುರುತಿಸಿ ವಿಶೇಷ ಭದ್ರತೆ ಒದಗಿಸಲು ಸರ್ಕಾರ ಬದ್ಧವಾಗಿದೆಯೆ; ಇದ್ದಲ್ಲಿ ಅದರ ಸಂಪೂರ್ಣ ಕ್ರಿಯಾ ಯೋಜನೆಯನ್ನುನೀಡುವುದು ? | ಜೆಜೆಆರ್ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಇಂತಹ ಪ್ರಕರಣಗಳು ಮರುಕಳಿಸದಂತೆ ತಡೆಯುವ ಸಲುವಾಗಿ ಠಾಣಾ ವ್ಯಾಪ್ತಿಯಲ್ಲಿ ಸೂಕ್ಷ ಪ್ರದೇಶಗಳನ್ನು ಗುರುತಿಸಿ, ಅವರ ಸುರಕ್ಷತೆಗಾಗಿ ಮತ್ತು ಅಪರಾಧ ನಿಯಂತ್ರಣಕ್ಕಾಗಿ ಆ ಪ್ರದೇಶಗಳಲ್ಲಿ ಈ ಕೆಳಕಂಡಂತೆ ಸಿಸಿ ಟಿವಿ ಕ್ಯಾಮರಾಗಳನ್ನು ಅಳವಡಿಸಿದೆ.<br><br>ಘಟನೆ ನಡೆಯುವುದಕ್ಕೆ ಮುಂಚೆ ಜೆ.ಜೆ.ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ 129 ಸಿಸಿ ಟಿವಿ ಅಳವಡಿಸಿದೆ. ದಿನಾಂಕ: 04.01.2025 ರಂದು ಘಟನೆಯ ನಂತರ ಘಟನೆಗೆ ಸಂಬಂಧಿಸಿದ ಪ್ರದೇಶಗಳಲ್ಲಿ ಹೆಚ್ಚುವರಿಯಾಗಿ 16 ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಆದಾಗ್ಯೂ ಸ್ಥಳೀಯ ಶಾಸಕರು ಮತ್ತು ಸಂಸದರೊಂದಿಗೆ ಸಮನ್ವಯ ಸಾಧಿಸಿ 16 ಹೆಚ್ಚುವರಿ ಕ್ಯಾಮೆರಾಗಳನ್ನು ಅಳವಡಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಹೆಚ್ಚುವರಿ ಸಿಬ್ಬಂದಿ, ಸಾರ್ವಜನಿಕರೊಂದಿಗೆ ಉತ್ತಮ ಸಂವಹನ ಮತ್ತು ಶಾಂತಿ ಸಭೆಗಳನ್ನು ನಡೆಸಲಾಗುತ್ತಿದೆ.<br><br>ಕೆಎಸ್ಆರ್‌ಪಿ/ಸಿಎಆರ್ ತುಕಡಿಗಳು ಮುಂತಾದ ವಿಶೇಷ ಬಲಗಳನ್ನು ಹಿಂಸಾಚಾರ ಸಂಭವನೀಯತೆ ಇರುವ |

| | | |
|---|---|---|
| | | ಸ್ಥಳಗಳಿಗೆ ನಿಯೋಜಿಸಲಾಗುತ್ತದೆ. ಸಮುದಾಯ ನಾಯಕರೊಂದಿಗೆ ಸಂವಾದ, ಶಾಂತಿ ಸಮಿತಿ ಸಭೆಗಳು ಮತ್ತು ಪ್ರದೇಶದ ಹಿಂದಿನ ಘಟನೆಗಳ ಪರಿಶೀಲನೆ ಮೂಲಕ ಪೂರ್ವ ಸಿದ್ಧತೆ ಮಾಡಿಕೊಂಡು ಶಾಂತಿ ಸೌಹಾರ್ದತೆ ಕಾಪಾಡಲಾಗುತ್ತಿದೆ.<br><br>ಸೂಕ್ಷ್ಮ ಪ್ರದೇಶಗಳಲ್ಲಿ ಕೆಎಸ್‌ಆರ್‌ಪಿ/ಡಿಸ್ಕ್ವಾಡ್ ಪಡೆಗಳೊಂದಿಗೆ ಪಥಸಂಚಲನ ನಡೆಸಿ ಜನ ಸಾಮಾನ್ಯರಲ್ಲಿ ಸುರಕ್ಷತೆಯ ಬಗ್ಗೆ ವಿಶ್ವಾಸ ಮತ್ತು ಭರವಸೆ ಮೂಡಿಸಲಾಗುತ್ತಿದೆ.<br><br>ಪೊಲೀಸ್ ಇಲಾಖೆಯು ತಂತ್ರಜ್ಞಾನ, ಸಿಬ್ಬಂದಿ ಮತ್ತು ಸಮುದಾಯ-ಪ್ರತಿಭಾಗಿತ್ವದೊಂದಿಗೆ ಧಾರ್ಮಿಕ ಗೊಂದಲ ಮತ್ತು ಕಲ್ಲು ತೂರಾಟದಂತಹ ಅಹಿತಕರ ಘಟನೆಗಳನ್ನು ತಡೆಯಲು ನಿರಂತರವಾಗಿ ಕಾರ್ಯ ಯೋಜನೆಗಳನ್ನು ರಚಿಸುತ್ತಾ ಅವುಗಳನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಹೆಚ್‌ಡಿ 58 ಎಸ್‌ಎಸ್‌ಟಿ 2026

**(ಡಾ: ಜಿ.ಪರಮೇಶ್ವರ)**
ಗೃಹ ಸಚಿವರು.